# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕೋರಮಂಗಲ ಉಪ-ವಿಭಾಗದ, ಈಜೀಪುರ ವಾರ್ಡ್ ಸಂಖ್ಯೆ-148 ದಿನಾಂಕ:03-06-2021 ರಂದು ಜೂನ್-2021 ರ ವಾರ್ಡ್ ಸಮಿತಿಯ ವಿಶೇಷ ಸಭೆಯ ನಡವಳಿಗಳು

ಶ್ರೀ ಕಿರಣ್ ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಯೋಜನೆ (ಯಲಹಂಕ) ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 148ರ ರವರ ಅಧ್ಯಕ್ಷತೆಯಲ್ಲಿ ZOOM MEETING ಮುಖಾಂತರ ದಿನಾಂಕ:03.06.2021 ರಂದು ಮಧ್ಯಾಹ್ನ 12.00 ಗಂಟೆಗೆ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ವಿಶೇಷ ಸಭೆಯ ನಡವಳಿಗಳು:

ಹಾಜರಿದ್ದವರು:-

1. ಶ್ರೀ ಪಿ. ಬಾಲಕೃಷ್ಣನ್
2. ಡಾ॥ ಪ್ರಕಾಶರೆಡ್ಡಿ
3. ಶ್ರೀ ರಾಜೇಂದ್ರ ಬಾಬು
4. ಶ್ರೀ ಶಂಕರಪ್ಪ ರೆಡ್ಡಿ
5. ಶ್ರೀ ರವೀಂದ್ರ

ಹಾಜರಿದ್ದ ಅಧಿಕಾರಿಗಳು:-

1. ಶ್ರೀ ಪ್ರದೀಪ್ ಕುಮಾರ್, ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್-148 ಈಜೀಪುರ
2. ಶ್ರೀ ಮುತ್ತುರಾಜ್, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-148

* * * * *

ಶ್ರೀ ಕಿರಣ್ ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಯೋಜನೆ (ಯಲಹಂಕ) ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 148 ರವರು ZOOM MEETING ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು ಕೋವಿಡ್-19 ಪ್ರಕರಣಗಳನ್ನು ನಿರ್ವಹಿಸುವಲ್ಲಿ ಪಾಲಿಕೆ ತೆಗೆದುಕೊಂಡ ಕ್ರಮಗಳು ಮತ್ತು ನಿಯಂತ್ರಿಸುವ ಕ್ರಮಗಳ ಬಗ್ಗೆ ಚರ್ಚಿಸಲು ತಿಳಿಸಿದರು.

ಈಜೀಪುರ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣಗಳನ್ನು ನಿಯಂತ್ರಿಸಲು ಕೆಮಿಕಲ್ ಸ್ಪ್ರೇಯಿಂಗ್ ಅನ್ನು ಸಮರ್ಪಕವಾಗಿ ಕೈಗೊಳ್ಳುತ್ತಿರುವ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಸಭೆಗೆ ತಿಳಿಸಿದರು. ಮುಂದುವರೆದು ಮಳೆ ಪ್ರಾರಂಭವಾದ ನಂತರ ಪ್ರಕರಣಗಳ ಸಂಖ್ಯೆಯಲ್ಲಿ ಗಣನೀಯ ಇಳಿಕೆಯಾದ ಕಾರಣ ಕೆಮಿಕಲ್ ಸ್ಪ್ರೇಯಿಂಗ್ ಅನ್ನು ನಿಲ್ಲಿಸಿರುವುದಾಗಿ ಸಭೆಗೆ ತಿಳಿಸಿದರು.

ಶ್ರೀ ಅನಿಲ್ ಕುಮಾರ್ ರವರು ಮಾತನಾಡಿ, ಪ್ರತ್ಯೇಕವಾಗಿ ಒಂದು ವಸತಿ ಸಮುಚ್ಚಯಕ್ಕೆ ಪ್ರತ್ಯೇಕವಾಗಿ ಹ್ಯಾಂಡ್ ಸ್ಯಾನಿಟೈಸರ್ ಅನ್ನು ಬಿ.ಬಿ.ಎಂ.ಪಿ. ವತಿಯಿಂದ ಒದಗಿಸಲು ಸಾಧ್ಯವೇ ಎಂಬುದರ ಬಗ್ಗೆ ಚರ್ಚಿಸಲಾಗಿ ನೋಡಲ್ ಅಧಿಕಾರಿ ರವರು ಪಾಲಿಕೆ ವತಿಯಿಂದ ಸಾರ್ವಜನಿಕ ರಸ್ತೆಗಳು ಮತ್ತು ಸಾರ್ವಜನಿಕ ಸ್ಥಳಗಳನ್ನು ಮಾತ್ರ ಬಿ.ಬಿ.ಎಂ.ಪಿ. ವತಿಯಿಂದ ಸ್ಯಾನಿಟೈಜ್ ಮಾಡಲಾಗುತ್ತಿದ್ದು, ಖಾಸಗಿ ಸ್ವತ್ತು / ಸಮುಚ್ಚಯದವರು ಪ್ರತ್ಯೇಕವಾಗಿ ಸ್ವಂತ ಉಪಯೋಗಕ್ಕೆ ಹ್ಯಾಂಡ್ ಸ್ಯಾನಿಟೈಸ್ ಅನ್ನು ತಮ್ಮ ಸ್ವಂತ ಖರ್ಚಿನಿಂದ ಖರೀದಿಸಿ, ಉಪಯೋಗಿಸಬಹುದು ಎಂದು ಸಭೆಗೆ ತಿಳಿಸಿದರು.



Scanned by CamScanner

ಮುಂದುವರೆದು, ಮೆಡಿಕಲ್ ಕಿಟ್‌ಗಳನ್ನು ಕೋವಿಡ್ -19 ಪಾಸಿಟಿವ್ ಬಂದಂತಹ ರೋಗಿಗಳು ಹೋಂ ಐಸೋಲೇಷನ್‌ನಲ್ಲಿರುವವರಿಗೆ ಉಚಿತವಾಗಿ ಒದಗಿಸುತ್ತಿರುವ ಬಗ್ಗೆ ಮಾಹಿತಿ ಕೋರಲಾಗಿ, ಡಾ॥ ಸೈಯ್ಯದ್ ಮುದಾಷೀರ್ ರವರು ಈ ಬಗ್ಗೆ ಸಮರ್ಪಕವಾಗಿ ವಿತರಿಸುತ್ತಿರುವ ಬಗ್ಗೆ ಶ್ರೀ.ಅನಿಲ್ ಕುಮಾರ್ ರವರಿಗೆ ಹಾಗೂ ಸಭೆಗೆ ತಿಳಿಸಿದರು.

ಶ್ರೀ.ರಾಜೇಂದ್ರ ಬಾಬು ರವರು ಮಾತನಾಡಿ, 1ನೇ ಮುಖ್ಯರಸ್ತೆ, ಎಸ್.ಟಿ. ಬೆಡ್ ಸೇವಾ ಇನ್ ಆಕ್ಷನ್ ಬಳಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಪೈಪ್‌ಲೈನ್ ಅಳವಡಿಸುವ ಕಾಮಗಾರಿಯನ್ನು ಪೂರ್ಣಗೊಂಡ ನಂತರ ತ್ಯಾಜ್ಯವನ್ನು ತೆರವುಗೊಳಿಸದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಗಿ, ಈ ಬಗ್ಗೆ ಕ್ರಮವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ತಿಳಿಸುವುದಾಗಿ ಕಾರ್ಯದರ್ಶಿ ರವರು ತಿಳಿಸಿದರು.

ಕೋವಿಡ್ ಲಾಕ್‌ಡೌನ್ ಸಮಯದಲ್ಲಿ ಸಾರ್ವಜನಿಕರು ಎಲ್ಲೆಂದರಲ್ಲಿ ಓಡಾಡುತ್ತಿರುವ ಬಗ್ಗೆ ಕ್ರಮಕೈಗೊಳ್ಳಲು ಪೊಲೀಸ್ ಇಲಾಖೆ ರವರು ಗಸ್ತು ತಿರುಗುವ ಸಂಖ್ಯೆಯನ್ನು ಹೆಚ್ಚಿಸಿದಲ್ಲಿ ಲಾಕ್‌ಡೌನ್ ಯಶಸ್ವಿಗೊಳಿಸಿ, ಕೋವಿಡ್ ಅನ್ನು ನಿಯಂತ್ರಿಸುವಲ್ಲಿ ಸಹಕಾರಿಯಾಗುವುದು ಎಂದು ಶ್ರೀ.ಅನಿಲ್ ಕುಮಾರ್ ರವರು ತಿಳಿಸಿದರು.

ಶ್ರೀ.ಕಿರಣ್.ಬಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಯೋಜನೆ (ಯಲಹಂಕ) ಮತ್ತು ನೋಡಲ್ ಅಧಿಕಾರಿಗಳು ಮಾತನಾಡಿ, ಕೋವಿಡ್ ಪಾಸಿಟಿವ್ ಬಂದಂತಹ ಸಂದರ್ಭದಲ್ಲಿ ಕೂಡಲೇ ಹತ್ತಿರದ ಟ್ರೈಯಾಜ್ ಕೇಂದ್ರಕ್ಕೆ ಭೇಟಿ ನೀಡಿ, ಚಿಕಿತ್ಸೆ ಪಡೆಯಲು ಹಾಗೂ ಸರ್ಕಾರದ ಮಾರ್ಗಸೂಚಿಗಳನ್ವಯ ಆಗಿಂದ್ದಾಗೆ ಕ್ರಮವಹಿಸಲು ಬಿಬಿಎಂಪಿಯೊಂದಿಗೆ ಸಹಕರಿಸಲು ಎಲ್ಲಾ ಸದಸ್ಯರು ಮತ್ತು ಸ್ವಯಂಸೇವಕರನ್ನು ಕೋರಿದರು ಹಾಗೂ ಈಜೀಪುರ ವಾರ್ಡ್‌ನಲ್ಲಿ ಕೋವಿಡ್ ಸಾಂಕ್ರಾಮಿಕ ರೋಗವು ಇಳಿಕೆಯಾಗುವಲ್ಲಿ ಶ್ರಮವಹಿಸಿದ ವಾರ್ಡ್ ಮಟ್ಟದ ಅಧಿಕಾರಿಗಳಾದ ಡಾಕ್ಟರ್‌ಗಳು, ವೈದ್ಯಕೀಯ ಸಿಬ್ಬಂಧಿ, ಇಂಜಿನಿಯರ್‌ಗಳು, ಕಂದಾಯ ಇಲಾಖೆ ಅಧಿಕಾರಿಗಳು, ವಾರ್ಡ್ ಕಮಿಟಿ ಸದಸ್ಯರು ಹಾಗೂ ವಾರ್ಡ್‌ನ ಸ್ವಯಂ ಸೇವಕರು ಹಗಲಿರುಳು ಕೋವಿಡ್ ಮುಕ್ತಗೊಳಿಸಲು ಸಕ್ರಿಯವಾಗಿ ಶ್ರಮಿಸಿರುವುದಕ್ಕೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

(ಶ್ರೀ ಪ್ರದೀಪ್ ಕುಮಾರ್.ಆರ್)
ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್-148 ಈಜೀಪುರ

(ಶ್ರೀ ಕಿರಣ್.ಬಿ)
ನೋಡಲ್ ಅಧಿಕಾರಿಗಳು
ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್-148 ಈಜೀಪುರ



Scanned by CamScanner